ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು 3 ನೇ ಪ್ರತಿವಾದಿ ಪರ ಶ್ರೀ ಕೆ.ಎಂ.ಜೆ. ವಕೀಲರಿಂದಃ-

ನಾನು ಪ್ರಸ್ತುತ ದಾವೆಯಲ್ಲಿ ಯಾವುದೇ ಲಿಖಿತ ಹೇಳಿಕೆ ಸಲ್ಲಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಡಿ-2 ರ ವಿಲ್ ನಲ್ಲಿ ಏನು ಬರೆದಿರುವ ಮಾಹಿತಿ ನನಗೆ ತಿಳಿದಿರುತ್ತದೆ. ಸದರಿ ವಿಲ್ ನಲ್ಲಿ ನಿಮಗೆ ಏನು ಭಾಗ ಕೊಟ್ಟಿರುತ್ತಾರೆ ಎಂದರೆ ಸಾಕ್ಷಿ ಎಲ್ಲಾ ಹೆಣ್ಣು ಮಕ್ಕಳಿಗೆ ಭಾಗ ಇರುತ್ತದೆ ಎಂದು ಬರೆದಿರುತ್ತಾರೆ. ಸದರಿ ವಿಲ್ ಅನ್ನು ದಿನಾಂಕ 28.07.2020 ರಲ್ಲಿ ನಿಮ್ಮ ತಂದೆಯವರೇ ರದ್ದುಪಡಿಸಿರುತ್ತಾರೆ ಎಂದರೆ ಸಾಕ್ಷಿಯು ಅದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ಹಿಂದೆ ವಾದಿಗಳ ಜೊತೆ ಸೇರಿಕೊಂಡು ಎಲ್ಲಾ ಹೆಣ್ಣು ಮಕ್ಕಳು ನಮ್ಮ ತಂದೆ ಜೀವಂತ ಇದ್ದಾಗೆ ನಮ್ಮ ತಂದೆ ಮತ್ತು ತಮ್ಮನ ವಿರುದ್ಧ ಭಾಗಕ್ಕಾಗಿ ಓ.ಎಸ್.295/2008 ರಂತೆ ದಾವೆ ಸಲ್ಲಿಸಿದ್ದೆವು ಎಂದರೆ ಸಾಕ್ಷಿ ಆ ಬಗ್ಗೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆ ದಾವೆಯಲ್ಲಿ ನಿಮ್ಮ ತಂದೆಯವರು ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿ ಆ ಬಗ್ಗೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

ಈ ಹಂತದಲ್ಲಿ ಬೆಳಗಿನ ನ್ಯಾಯಾಲಯದ ಸಮಯ ಮುಕ್ತಾಯವಾದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.